Akashvani : Bangalore
Regional Bulletin In Kannada
23.01.2026 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ನಾಳೆ ಹುಬ್ಬಳ್ಳಿಯಲ್ಲಿ ೪೨ ಸಾವಿರದ ೩೪೫ ಮನೆಗಳ ಲೋಕಾರ್ಪಣೆ
- ಅಕ್ರಮ ಮರೆಮಾಚಲು ವಿಕಸಿತ ಭಾರತ ಜಿ-ರಾಮ್-ಜಿ ಯೋಜನೆ ವಿರುದ್ಧ ರಾಜ್ಯ ಸರ್ಕಾರ ಅಪಪ್ರಚಾರ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪ
- ಕಾಡ್ಗಿಚ್ಚು ನಿಯಂತ್ರಣಕ್ಕೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳುವಂತೆ ಅರಣ್ಯ ಸಚಿವ ಈಶ್ವರ್ ಬಿ. ಖಂಡ್ರೆ ಸೂಚನೆ
- ಗ್ರಾಮ ಪಂಚಾಯತಿಗಳ ತೆರಿಗೆ ಸಂಗ್ರಹ ; ರಾಜ್ಯದಲ್ಲೇ ಚಿಕ್ಕಬಳ್ಳಾಪುರ ಜಿಲ್ಲೆ ಪ್ರಥಮ ಸ್ಥಾನ

<><*<><>*><>

ವಸತಿ ಇಲಾಖೆ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ಮುಖ್ಯಮಂತ್ರಿಯವರ ವಿಶೇಷ ಅನುದಾನದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ಮಂಡಳಿ ವತಿಯಿಂದ ರಾಜ್ಯದಾದ್ಯಂತ ನಿರ್ಮಾಣಗೊಳ್ಳುತ್ತಿರುವ ೧ ಲಕ್ಷದ ೮೦ ಸಾವಿರದ ೨೫೩ ಮನೆಗಳ ಪೈಕಿ ಎರಡನೇ ಹಂತದ ೪೨ ಸಾವಿರದ ೩೪೫ ಮನೆಗಳ ಲೋಕಾರ್ಪಣೆ ಸಮಾರಂಭ ನಾಳೆ ಹುಬ್ಬಳ್ಳಿಯ ಮಂಟೂರು ರಸ್ತೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮನೆಗಳನ್ನು ಲೋಕಾರ್ಪಣೆಗೊಳಿಸುವರು. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ರಾಜ್ಯಸಭೆ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ್ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಸತಿ ಸಚಿವ ಜಮೀರ್ ಅಹಮದ್ ಖಾನ್ ಉಪಸ್ಥಿತರಿರುವರು.

<><*<><>*><>

ಕಳೆದ ಎರಡೂ ಮುಕ್ಕಾಲು ವರ್ಷಗಳಲ್ಲಿ ನಡೆಸಿರುವ ಅನ್ಯಾಯ, ಅಕ್ರಮಗಳನ್ನು ಮರೆಮಾಚಲು ವಿಕಸಿತ ಭಾರತ್ ಜಿ-ರಾಮ್-ಜಿ ಯೋಜನೆಯ ಬಗ್ಗೆ ಕಾಂಗ್ರೆಸ್ ಸರ್ಕಾರ ಅಪಪ್ರಚಾರ ಮಾಡುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ದೂರಿದ್ದಾರೆ. ಮಂಡ್ಯದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ರಾಜ್ಯಪಾಲರ ವಿಷಯದಲ್ಲಿ ಕಾಂಗ್ರೆಸ್ ಹೇಗೆ ನಡೆದುಕೊಂಡಿತ್ತು ಎಂಬುದರ ಬಗ್ಗೆ ಒಮ್ಮೆ ನೆನಪು ಮಾಡಿಕೊಂಡರೆ ಅವರ ಬಣ್ಣ ಬಯಲಾಗುತ್ತದೆ. ವಿಶೇಷ ಅಧಿವೇಶನ ಕರೆದು ಅಲ್ಲಿ ಸಮಯ ಪೋಲು ಮಾಡುತ್ತಿದ್ದಾರೆ ಎಂದರು. ರಾಜ್ಯಪಾಲರು ಭಾಷಣ ಓದದಿರುವ ಅಥವಾ ಮೊಟಕುಗೊಳಿಸಿರುವ ಘಟನೆ ಇದೇ ಮೊದಲ ಬಾರಿ ನಡೆದದ್ದಲ್ಲ. ಜೆ.ಹೆಚ್. ಪಟೇಲರ ಅವಧಿಯಲ್ಲಿ ಉಪಮುಖ್ಯಮಂತ್ರಿ ಆಗಿದ್ದ ಸಿದ್ದರಾಮಯ್ಯ ಅವರು ಅಂದಿನ ಸಂದರ್ಭವನ್ನು ನೆನಪು ಮಾಡಿಕೊಳ್ಳಬೇಕು. ಈಗ ನೋಡಿದರೆ ಅನಗತ್ಯವಾಗಿ ವಿಧಾನಸಭೆ ಕಲಾಪದಲ್ಲಿ ಸಂಘರ್ಷ ನಡೆಯುತ್ತಿದೆ ಎಂದು ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು.

<><*<><>*><>

ರಥಸಪ್ತಮಿಯ ನಂತರ ಬಿಸಿಲು ಹೆಚ್ಚಾಗಿ ಕಾಡ್ಗಿಚ್ಚಿನ ಅಪಾಯವೂ ಹೆಚ್ಚುವ ಕಾರಣ ಎಲ್ಲ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲು ಅರಣ್ಯಾಧಿಕಾರಿಗಳಿಗೆ ಅರಣ್ಯ ಸಚಿವ ಈಶ್ವರ್ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲ ಅರಣ್ಯ ಮತ್ತು ವನ್ಯಜೀವಿ ವಿಭಾಗದ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕಾಡಿನ ಬೆಂಕಿಗೆ ಅರಣ್ಯ ಸಂಪತ್ತು ನಾಶವಾಗದ ರೀತಿಯಲ್ಲಿ ಕಟ್ಟೆಚ್ಚರ ವಹಿಸಬೇಕು. ಡ್ರೋನ್ ಸೌಲಭ್ಯ ಇರುವ ಕಡೆ ಕ್ಯಾಮೆರಾ ಮೂಲಕ ನಿಗಾ ಇಡಬೇಕು. ಗಸ್ತು ಹೆಚ್ಚಿಸಿ, ಸೂಕ್ಷ್ಮ ಪ್ರದೇಶಗಳಲ್ಲಿ ಸಿಬ್ಬಂದಿ ಎಚ್ಚರದಿಂದ ಇರಬೇಕು ಎಂದು ನಿರ್ದೇಶಿಸಿದರು. ಬೇಸಿಗೆಯಲ್ಲಿ ವನ್ಯಜೀವಿಗಳಿಗೆ ಕಾಡಿನಲ್ಲಿ ಮೇವು ಮತ್ತು ಕುಡಿಯುವ ನೀರಿನ ಕೊರತೆ ಆಗದಂತೆಯೂ ಎಚ್ಚರ ವಹಿಸಲು, ಜಲಗುಂಡಿಗಳಿಗೆ ಸೌರ ಪಂಪ್‌ಗಳ ಮೂಲಕ ಕೊಳವೆ ಬಾವಿಯಿಂದ ನೀರು ಹರಿಸುವಂತೆ ಅವರು ಸೂಚಿಸಿದರು. ಭಕ್ತರು ಕಾಲುದಾರಿಯಲ್ಲಿ ಮೆಟ್ಟಿಲೇರಿ ಮಲೆ ಮಹದೇಶ್ವರ ಬೆಟ್ಟಕ್ಕೆ ಬರುವ ಮಾರ್ಗದಲ್ಲಿ ಡ್ರೋನ್ ಕ್ಯಾಮೆರಾ ಅಳವಡಿಸಬೇಕು. ಕಾಲುದಾರಿ, ಮೆಟ್ಟಿಲು ಇರುವ ಪ್ರದೇಶದಲ್ಲಿ ಅರಣ್ಯ ಸಿಬ್ಬಂದಿ, ಗೃಹ ರಕ್ಷಕರು ಮತ್ತು ಸ್ಥಳೀಯ ಸಿಬ್ಬಂದಿ ಒಳಗೊಂಡ ತಂಡ ರಚಿಸಿ, ಭಕ್ತರಿಗೆ ನೆರವಾಗಬೇಕು ಎಂದು ಅಧಿಕಾರಿಗಳಿಗೆ ಸಚಿವ ಈಶ್ವರ್ ಬಿ. ಖಂಡ್ರೆ ಸೂಚಿಸಿದರು.

<><*<><>*><>

ಕಳೆದ ಸೆಪ್ಟೆಂಬರ್‌ನಿಂದ ಇಲ್ಲಿಯವರೆಗೆ ಗ್ರಾಮ ಪಂಚಾಯಿತಿಗಳ ತೆರಿಗೆ ಸಂಗ್ರಹದಲ್ಲಿ ಶೇಕಡ ೯೫.೨೫ ರಷ್ಟು ತೆರಿಗೆ ಸಂಗ್ರಹ ಪ್ರಗತಿ ಸಾಧನೆ ಮಾಡುವ ಮೂಲಕ ಚಿಕ್ಕಬಳ್ಳಾಪುರ ಜಿಲ್ಲೆ ರಾಜ್ಯದಲ್ಲೇ ಪ್ರಥಮ ಸ್ಥಾನದಲ್ಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ವೈ.ನವೀನ್ ಭಟ್ ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ಜಿಲ್ಲೆಯಲ್ಲಿ ಒಟ್ಟು ೧೫೭ ಗ್ರಾಮ ಪಂಚಾಯಿತಿಗಳಿದ್ದು, ಈ ಪೈಕಿ ೫೫ ಗ್ರಾಮ ಪಂಚಾಯಿತಿಗಳು ಶೇಕಡ ೧೦೦ ರಷ್ಟು ತೆರಿಗೆ ಸಂಗ್ರಹ ಮಾಡಿವೆ. ೫೫ ಗ್ರಾಮ ಪಂಚಾಯಿತಿಗಳು ಶೇಕಡ ೯೦ ರಷ್ಟು ಹಾಗೂ ೪೭ ಗ್ರಾಮ ಪಂಚಾಯಿತಿಗಳು ಶೇಕಡ ೮೦ ರಷ್ಟು ತೆರಿಗೆ ಸಂಗ್ರಹ ಮಾಡುವ ಮೂಲಕ ಉತ್ತಮ ಪ್ರಗತಿ ಸಾಧಿಸಿವೆ ಎಂದು ಮಾಹಿತಿ ನೀಡಿದರು.

<><*<><>*><>

ಗದಗ ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಲಕ್ಕುಂಡಿ ಗ್ರಾಮದಲ್ಲಿ ಮನೆ ಅಡಿಪಾಯ ಅಗಿಯುತ್ತಿರುವಾಗ ಚಿನ್ನ ದೊರೆತಿರುವ ಹಿನ್ನೆಲೆಯಲ್ಲಿ ಫ್ರಾನ್ಸ್ ದೇಶದ ಹತ್ತು ಜನರ ಪ್ರವಾಸಿಗರ ತಂಡ ಲಕ್ಕುಂಡಿ ಗ್ರಾಮಕ್ಕೆ ಇಂದು ಭೇಟಿ ನೀಡಿ ವೀಕ್ಷಿಸಿದರು.  ಇದೇ ೧೦ ರಂದು ಲಕ್ಕುಂಡಿ ಗ್ರಾಮದಲ್ಲಿ ಮನೆ ನಿರ್ಮಾಣಕ್ಕಾಗಿ ಅಡಿಪಾಯ ಅಗಿಯುತ್ತಿರುವವಾಗ ೪೬೬ ಗ್ರಾಮ್ ಚಿನ್ನ ದೊರೆತಿರುವ ಸ್ಥಳವನ್ನು ಮತ್ತು ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಕೈಗೊಂಡಿರುವ ಉತ್ಖನನ ಕಾರ್ಯವನ್ನು ವಿದೇಶಿ ಪ್ರವಾಸಿಗರು ಆಸಕ್ತಿಯಿಂದ ವೀಕ್ಷಣೆ ಮಾಡಿದರು.

<><*<><>*><>

ಬೆಂಗಳೂರು ಪೂರ್ವ ನಗರ ಪಾಲಿಕೆಯ ಕೃಷ್ಣರಾಜಪುರ ವಲಯ ವ್ಯಾಪ್ತಿಯ ಹಳೆ ಮದ್ರಾಸ್ ಮುಖ್ಯರಸ್ತೆಯ ರಸ್ತೆಯ ಎರಡು ಬದಿಗಳಲ್ಲಿನ ವಾಣಿಜ್ಯ ಮಳಿಗೆಗಳ ಮುಂಭಾಗದಲ್ಲಿ ಅಳವಡಿಸಲಾಗಿರುವ ಅನಧಿಕೃತ ಜಾಹೀರಾತು ಹೋರ್ಡಿಂಗ್‌ಗಳು ಹಾಗೂ ಎಲ್.ಇ.ಡಿ ಜಾಹೀರಾತು ಫಲಕಗಳನ್ನು ನಗರ ಪಾಲಿಕೆಯ ಎಂಜಿನಿಯರಿಂಗ್, ಕಂದಾಯ, ವಿದ್ಯುತ್ ಮತ್ತು ಆರೋಗ್ಯ ಇಲಾಖೆಯ ತಂಡ, ವಿಶೇಷ ಜಂಟಿ ಕಾರ್ಯಾಚರಣೆ ಮೂಲಕ ತೆರವುಗೊಳಿಸಲಾಯಿತು ಎಂದು ಜಿಬಿಎ ಪೂರ್ವ ಪಾಲಿಕೆ ಆಯುಕ್ತ ಡಿ.ಎಸ್.ರಮೇಶ್ ತಿಳಿಸಿದ್ದಾರೆ. ಬೆಂಗಳೂರಿನ ಕೃಷ್ಣರಾಜಪುರ ವಲಯದ ಜಂಟಿ ಆಯುಕ್ತ

ಡಾ. ಸುಧಾ ನೇತೃತ್ವದಲ್ಲಿ ಈ ವಿಶೇಷ ಕಾರ್ಯಾಚರಣೆ ನಡೆಸಲಾಯಿತು. ಮುಖ್ಯರಸ್ತೆಯ ಎಡ ಮತ್ತು ಬಲ ಭಾಗಗಳಲ್ಲಿ ವಾಣಿಜ್ಯ ಮಳಿಗೆಗಳ ಮುಂಭಾಗಗಳಲ್ಲಿ ಅಳವಡಿಸಿಕೊಂಡಿದ್ದ ೧೭ಕ್ಕೂ ಹೆಚ್ಚಿನ ಅನಧಿಕೃತ ಜಾಹೀರಾತು ಹೋರ್ಡಿಂಗ್ಸ್ ಮತ್ತು ಎಲ್.ಇ.ಡಿ ಬೋರ್ಡ್‌ಗಳನ್ನು ತೆರವುಗೊಳಿಸಲಾಯಿತು ಎಂದು ಮಾಹಿತಿ ನೀಡಿದರು. ನಗರದ ಸೌಂದರ್ಯ, ಸಾರ್ವಜನಿಕ ಸುರಕ್ಷತೆ ಹಾಗೂ ಸಂಚಾರ ವ್ಯವಸ್ಥೆಯನ್ನು ಕಾಪಾಡುವ ನಿಟ್ಟಿನಲ್ಲಿ ಇಂತಹ ಅನಧಿಕೃತ ಜಾಹೀರಾತುಗಳ ವಿರುದ್ಧ ಪ್ರತಿ ವಾರ ನಿಯಮಿತವಾಗಿ ಇದೇ ರೀತಿ ವಿಶೇಷ ಕಾರ್ಯಾಚರಣೆಯನ್ನು ಮುಂದುವರಿಸಲಾಗುವುದು ಎಂದು ಡಿ.ಎಸ್.ರಮೇಶ್ ತಿಳಿಸಿದರು.

<><*<><>*><>

ನೇತಾಜಿ ಸುಭಾಶ್ ಚಂದ್ರ ಬೋಸರು ಕೇವಲ ಸೈನ್ಯವನ್ನು ಕಟ್ಟಲಿಲ್ಲ. ಬದಲಾಗಿ ಭಾರತೀಯರಲ್ಲಿ ದೇಶಪ್ರೇಮವನ್ನು ಬಿತ್ತಿದ್ದಾರೆ ಎಂದು ಸಂಪನ್ಮೂಲ ವ್ಯಕ್ತಿ ಶ್ರೀನಾಥ್ ಹೇಳಿದ್ದಾರೆ. ಕೋಲಾರ ನಗರದ ಸ್ಕೌಟ್ ಭವನದಲ್ಲಿ ಭಾರತ ಸರ್ಕಾರ, ಯುವಜನ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯ, ಮೈ-ಭಾರತ್ ಮತ್ತು ಕರುನಾಡ ಜಾನಪದ ಕಲಾ ಸಂಘ, ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮಹಾನ್ ಕ್ರಾಂತಿಕಾರಿ ನಾಯಕ ನೇತಾಜಿ ಸುಭಾಷ್ ಚಂದ್ರಬೋಸ್ ಅವರ ಜನ್ಮದಿನಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಐ.ಸಿ.ಎಸ್ ಹುದ್ದೆಯನ್ನು ತಿರಸ್ಕರಿಸಿ, ದೇಶದ ಸ್ವಾತಂತ್ರ್ಯಕ್ಕಾಗಿ ಅವರು ಆರಿಸಿಕೊಂಡ ದಾರಿ ಹಾಗೂ ಅವರ ತ್ಯಾಗ ಅನನ್ಯವಾದುದು. 'ನನಗೆ ರಕ್ತ ನೀಡಿ, ನಾನು ನಿಮಗೆ ಸ್ವಾತಂತ್ರ್ಯ ನೀಡುತ್ತೇನೆ' ಎಂಬ ಅವರ ಘೋಷಣೆ ಇಂದಿಗೂ ಯುವಜನತೆಯಲ್ಲಿ ಕಿಚ್ಚು ಹಚ್ಚುತ್ತದೆ. ಇಂದಿನ ಯುವಕರು ನೇತಾಜಿಯವರ 'ದೇಶ ಮೊದಲು' ಎಂಬ ತತ್ವವನ್ನು ಮೈಗೂಡಿಸಿಕೊಂಡು ರಾಷ್ಟ್ರ ನಿರ್ಮಾಣದಲ್ಲಿ ಪಾಲ್ಗೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

<><*<><>*><>

ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲು ನಿಲ್ದಾಣದಿಂದ ಮಾರಿಕುಪ್ಪಂಗೆ ಹೋಗುವ ರೈಲಿನ ಸೇವೆಯನ್ನು ಕೂಡಲೇ ಪುನರಾರಂಭಿಸಲು ಕ್ರಮ ಕೈಗೊಳ್ಳುವಂತೆ ಕೋಲಾರ ಸಂಸದ ಮಲ್ಲೇಶಬಾಬು, ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಅಶುತೋಷ್ ಕೆ.ಸಿಂಗ್ ಅವರಿಗೆ ಪತ್ರ ಬರೆದಿದ್ದಾರೆ. ಬೆಂಗಳೂರು ಕೆಎಸ್‌ಆರ್ ರೈಲು ನಿಲ್ದಾಣದಿಂದ ಮಧ್ಯಾಹ್ನ ೨ ಗಂಟೆಗೆ ಹೊರಟು ಮಾರಿಕುಪ್ಪಂ ನಿಲ್ದಾಣಕ್ಕೆ ಸಂಜೆ ೫ಕ್ಕೆ ತಲುಪುತ್ತಿದ್ದ ರೈಲು, ಸಾವಿರಾರು ಪ್ರಯಾಣಿಕರಿಗೆ ವರದಾನವಾಗಿತ್ತು. ಆದರೆ ಈ ರೈಲು ಪ್ರಸ್ತುತ ವೈಟ್‌ಫೀಲ್ಡ್‌ನಿಂದ ಹೊರಡುತ್ತಿವುದರಿಂದ ಪ್ರಯಾಣಿಕರಿಗೆ ಅನಾನುಕೂಲವಾಗುತ್ತಿದೆ. ಸಾರ್ವಜನಿಕರು, ಇದೇ ಸಮಯದಲ್ಲಿ ಹೊರಡುವ ಬೃಂದಾವನ್ ರೈಲಿನ ಮೊರೆಹೋಗಿದ್ದು, ರೈಲಿನಲ್ಲಿ ಪ್ರಯಾಣಿಕರು ಕಿಕ್ಕಿರಿದು ತುಂಬಿರುತ್ತಾರೆ. ಜೊತೆಗೆ ದಿನನಿತ್ಯ ಸಂಚರಿಸುವವರಿಗೆ ದುಬಾರಿಯಾಗಿದೆ ಎಂದು ಅವರು ಪತ್ರದಲ್ಲಿ ವಿವರಿಸಿದ್ದಾರೆ. ಸಾರ್ವಜನಿಕರ ಹಿತದೃಷ್ಟಿಯಿಂದ ಕೂಡಲೇ ಈ ರೈಲನ್ನು ಕೆಎಸ್‌ಆರ್ ರೈಲು ನಿಲ್ದಾಣದಿಂದ ಹೊರಡುವ ರೀತಿ ವ್ಯವಸ್ಥೆ ಮಾಡಬೇಕೆಂದು ಅವರು ಮನವಿ ಮಾಡಿದ್ದಾರೆ.

<><*<><>*><>

ಬೆಂಗಳೂರು ನಗರದಲ್ಲಿ ಫೀಲ್ಡ್ ಮಾರ್ಷಲ್ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಇದೇ ೨೬ರಂದು ನಡೆಯಲಿರುವ ರಾಜ್ಯ ಮಟ್ಟದ ೭೭ನೇ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ವೀಕ್ಷಿಸಲು ಸಾರ್ವಜನಿಕರಿಗೆ ಇ-ಪಾಸ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ ತಿಳಿಸಿದ್ದಾರೆ. ಆಸಕ್ತರು ಸೇವಾ ಸಿಂಧು ವೆಬ್‌ಸೈಟ್ sevasindhu.karnataka.gov.in ನಲ್ಲಿ ನಾಳೆ ಸಂಜೆ ೫ ಗಂಟೆಯೊಳಗೆ ಅಗತ್ಯವಿರುವ ಎಲ್ಲ ವೈಯಕ್ತಿಕ ವಿವರಗಳನ್ನು ನಮೂದಿಸಿ ಇ-

ಪಾಸ್‌ಗಳನ್ನು ಪಡೆಯಬಹುದು. ಇ-ಪಾಸ್‌ಗಳನ್ನು ಹೊಂದಿರುವವರು ಪರೇಡ್ ಮೈದಾನದ ಪ್ರವೇಶ ದ್ವಾರ ಸಂಖ್ಯೆಯಲ್ಲಿ ಪರಿಶೀಲನೆಗಾಗಿ ಇ-ಪಾಸ್‌ನ ಮುದ್ರಿತ ಪ್ರತಿಯನ್ನು ಅಥವಾ ಡಿಜಿಟಲ್ ಪ್ರತಿಯನ್ನು ಕಡ್ಡಾಯವಾಗಿ ಹೊಂದಿರಬೇಕು. ಇ-ಪಾಸ್ ನೋಂದಣಿ ಪ್ರಕ್ರಿಯೆ ಕುರಿತು ಸಹಾಯಕ್ಕಾಗಿ ಸೇವಾ ಸಿಂಧು ಜಾಲತಾಣದ ಸಹಾಯ ವಿಭಾಗವನ್ನು ವೀಕ್ಷಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

<><*<><>*><>

ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನಗಳ ಬಳಕೆಯಿಂದ ಆರೋಗ್ಯ ವೃದ್ಧಿಯಾಗುತ್ತದೆ ಎಂದು ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಹೇಳಿದ್ದಾರೆ. ಹಾಸನದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ವತಿಯಿಂದ ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನಗಳ ಕುರಿತು ಅರಿವು ಮೂಡಿಸುವ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ವಿಷಯುಕ್ತ ಆಹಾರ ಪದಾರ್ಥಗಳು ಮನುಷ್ಯನ ದೇಹ ಸೇರುತ್ತಿವೆ. ಅವುಗಳನ್ನು ನಿಯಂತ್ರಿಸದಿದ್ದರೆ ಮುಂದಿನ ದಿನಗಳಲ್ಲಿ ಅಪಾಯ ಕಟ್ಟಿಟ್ಟ ಬುತ್ತಿ ಎಂದರು. ಇತ್ತೀಚೆಗೆ ಕೃಷಿ ಕ್ಷೇತ್ರವು ಉದ್ಯಮವಾಗಿ ಮಾರ್ಪಟ್ಟಿದೆ. ಇದರ ನಡುವೆ ಸಾವಯವ ಕೃಷಿ ಹಾಗೂ ಗುಣಮಟ್ಟದ ಆಹಾರ ಪದಾರ್ಥಗಳ ಬಳಕೆ ಸವಾಲಿನ ಕೆಲಸವಾಗಿದೆ. ಈ ನಿಟ್ಟಿನಲ್ಲಿ ಸಾವಯವ ಕೃಷಿ ಹಾಗೂ ಸಾವಯವ ಉತ್ಪನ್ನಗಳು ಮತ್ತು ಸಿರಿ ಧಾನ್ಯಗಳ ಬಳಕೆ ಬಗ್ಗೆ ಜಾಗೃತಿ ಮೂಡಿಸಲು ಸರ್ಕಾರ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ಹೇಳಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೦ ಕ್ಕೆ<>*><>